ವಿಧೇಯಕಗಳೂ ಕೂಡ ಬಜೆಟ್‌ನಲ್ಲಿ ಹೇಳಿರತಕ್ಕಂಥಾದ್ದಕ್ಕೆ ಕಾನ್ಸೀಕ್ವೆನ್‌ಷಿಯಲ್ ಬಿಲ್ಸ್ ಆಗಿರುವುದರಿಂದ, ಅವುಗಳಿಗೆ ಒಪ್ಪಿಗೆಯನ್ನು ಕೊಡಬೇಕೆಂದು ಕೋರುತ್ತೇನೆ.

ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ಮತ್ತು 3

ಅಧ್ಯಕ್ಷರು: "ಖಂಡ ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3ನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ ದೀರ್ಘ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ(ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ 2005

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 9ರವರೆಗೆ

ಅಧ್ಯಕ್ಷರು: "ಖಂಡ 2 ರಿಂದ 9ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"